<u>ಕರ್ನಾಟಕ ವಿಧಾನಪರಿಷತ್ತು</u>

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 684(628) |
| **ಮಾನ್ಯ ಸದಸ್ಯರ ಹೆಸರು** | ಡಾ.ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 18.08.2025 |

| | **ಪ್ರಶ್ನೆ** | **ಉತ್ತರ** |
|---|---|---|
| ಅ) | ಹಾವೇರಿ ಜಿಲ್ಲೆಯ ಗೋಟಗೋಡಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ತಾತ್ಕಾಲಿಕ ಸಹಾಯಕ ಪ್ರಾಧ್ಯಾಪಕರು/ಅತಿಥಿ ಉಪನ್ಯಾಸಕರು ವೇತನ ತಾರತಮ್ಯ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳುವ ಅರ್ಹ ಉಪನ್ಯಾಸಕರಿಗೆ ಆಯಾ ಶೈಕ್ಷಣಿಕ ಸಾಲಿನ ಬೋಧನ ಕಾರ್ಯಭಾರದನ್ವಯ ವೇತನವನ್ನು ನಿಗದಿಪಡಿಸುತ್ತದೆ. |
| ಆ) | ಧಾರವಾಡ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ವರ್ಷದಲ್ಲಿ 10-11 ತಿಂಗಳ ಕಾರ್ಯಭಾರ ನೀಡಿದರೆ ಜಾನಪದ ವಿಶ್ವವಿದ್ಯಾಲಯದಲ್ಲಿ ಕೇವಲ ವರ್ಷದಲ್ಲಿ 07 ತಿಂಗಳ ಕಾರ್ಯಭಾರ ನೀಡುತ್ತಿರುವುದು ನಿಜವೆ: | ಕರ್ನಾಟಕ ಜಾನಪದ ವಿಶ್ವವಿದ್ಯಾಲಯವು ಆಯಾ ಶೈಕ್ಷಣಿಕ ಸಾಲಿನ ಬೋಧನಾ ಕಾರ್ಯಭಾರದ ವೇಳಾಪಟ್ಟಿಯಂತೆ ಕಾರ್ಯಭಾರ ನೀಡುತ್ತಿದೆ. |
| ಇ) | ಬೇರೆ ವಿಶ್ವವಿದ್ಯಾಲಯಗಳಲ್ಲಿ ರೂ.35-50 ಸಾವಿರದವರೆಗೆ ಪ್ರತಿ ತಿಂಗಳು ವೇತನ ನೀಡುತ್ತಿದ್ದರೆ ಜಾನಪದ ವಿಶ್ವವಿದ್ಯಾಲಯದಲ್ಲಿ 10 ವರ್ಷದಿಂದ ಕೇವಲ ರೂ.25 ಸಾವಿರ ಪ್ರತಿ ತಿಂಗಳು ವೇತನ ನೀಡುತ್ತಿರುವುದು ತಾರತಮ್ಯ ಮಾಡಿದಂತಾಗುವುದಿಲ್ಲವೆ: | ಕರ್ನಾಟಕದ ಜನಪದ ಸಾಹಿತ್ಯ, ಕಲೆ, ಸಂಗೀತ, ರಂಗಭೂಮಿ, ಕರಕುಶಲಕಲೆ, ಜಾನಪದ ವೈದ್ಯಪದ್ಧತಿ, ಆಹಾರ, ಪಾನೀಯ, ಗುಡಿಕೈಗಾರಿಕೆಯಂತಹ ಕ್ಷೇತ್ರಗಳಲ್ಲಿ ಉನ್ನತ ಶಿಕ್ಷಣ ಮತ್ತು ಸಂಶೋಧನೆ ಅವಕಾಶವನ್ನು ಕಲ್ಪಿಸುವ ದೃಷ್ಠಿಯಿಂದ ವಿಶೇಷ ಕಾಯ್ದೆಯಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿದ್ದು, ಸದರಿ ವಿಶ್ವವಿದ್ಯಾಲಯಕ್ಕೆ ಯಾವುದೇ ಸಂಯೋಜಿತ ಕಾಲೇಜುಗಳು ಇರುವುದಿಲ್ಲ ಹಾಗೂ ಈ ವಿಶ್ವವಿದ್ಯಾಲಯವು ಸರ್ಕಾರವು ನೀಡುವ ಅನುದಾನದಲ್ಲಿ ನಡೆಯುತ್ತಿದ್ದು, ಆಂತರಿಕ ಸಂಪನ್ಮೂಲ ಕ್ರೂಢೀಕರಣದ ಲಭ್ಯತೆಯು ಅಲ್ಪ ಪ್ರಮಾಣದಲ್ಲಿರುವುದರಿಂದ, ಈ ವಿಶ್ವವಿದ್ಯಾಲಯದಲ್ಲಿರುವ ತಾತ್ಕಾಲಿಕ ಬೋಧಕ ಸಿಬ್ಬಂದಿಗಳಿಗೆ ಆಯಾ ಶೈಕ್ಷಣಿಕ ಸಾಲಿನ ಬೋಧನ ಕಾರ್ಯಭಾರದನ್ವಯ ವೇತನವನ್ನು ಮಾಸಿಕ ರೂ. 25000 /- ಗಳನ್ನು ಹಾಗೂ ತಾತ್ಕಾಲಿಕ ಅತಿಥಿ ಉಪನ್ಯಾಸಕರಿಗೆ ರೂ. 12500/-ಗಳನ್ನು ವಿಶ್ವವಿದ್ಯಾಲಯವು ನೀಡುತ್ತಿದೆ. |

| | | |
|---|---|---|
| ಈ) | ಜಾನಪದ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ನೇಮಕಾತಿ ಮಾಡಿಕೊಳ್ಳುವುದಿಲ್ಲ ಮತ್ತು ಆದೇಶ ಪತ್ರ ನೀಡದಿರುವುದು ಯಾವ ಕಾರಣಕ್ಕೆ: | ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಅಧಿನಿಯಮ, 2011ರ ಪ್ರಕರಣ 54ರಡಿ ವಿಶ್ವವಿದ್ಯಾಲಯದ ಕುಲಪತಿಗಳು ವಿಶ್ವವಿದ್ಯಾಲಯಕ್ಕೆ ಮಂಜೂರಾದ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳಿಗೆ ವಿಳಂಬವಿಲ್ಲದೆ, ಒಂದು ವರ್ಷಕ್ಕೆ ಮೀರದ ಅವಧಿಗೆ ತಾತ್ಕಾಲಿಕ ನೇಮಕಾತಿಗಳನ್ನು ಮಾಡಲು ನಿಯಮವನ್ನು ಕಲ್ಪಿಸಲಾಗಿದ್ದು, ಅದರನ್ವಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಪ್ರತಿ ಶೈಕ್ಷಣಿಕ ವರ್ಷ ಬೋಧನಾ ಕಾರ್ಯಗಳು ಆರಂಭವಾಗುವ ಮುಂಚಿತವಾಗಿ ದಿನಪತ್ರಿಕೆಗಳಲ್ಲಿ ತಾತ್ಕಾಲಿಕ ಅತಿಥಿ ಉಪನ್ಯಾಸಕರ/ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಅಧಿಸೂಚನೆ ಹೊರಡಿಸಿ, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ನಿಯಮಾನುಸಾರ ಸಂದರ್ಶನ ನಡೆಸಿ ಆಯ್ಕೆ ಮಾಡಿ ಆದೇಶ ಹೊರಡಿಸಿ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿದೆ. |
| ಉ) | ಸರ್ಕಾರದ ಅಧೀನದಲ್ಲಿ ಬರುವ ವಿಶ್ವವಿದ್ಯಾಲಯಗಳು ಸಮಾನವಾದ ವಿದ್ಯಾರ್ಹತೆ ಹೊಂದಿದ್ದರೂ ಕಾರ್ಯಭಾರ/ವೇತನ ತಾರತಮ್ಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಅನುಸರಿಸುತ್ತಿರುವುದು ವಿದ್ಯಾವಂತ ಶಿಕ್ಷಕರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಯಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ? | ಕರ್ನಾಟಕ ಜಾನಪದ ವಿಶ್ವವಿದ್ಯಾಲಯವು ಖಾಲಿಯಿರುವ ಬೋಧಕ/ ಬೋಧಕೇತರ ಹುದ್ದೆಗಳಿಗೆ ಯುಜಿಸಿ ಹಾಗೂ ರಾಜ್ಯ ಸರ್ಕಾರದ ನೀತಿ-ನಿಯಮಗಳನ್ವಯ ಅರ್ಹ ವಿದ್ಯಾರ್ಹತೆಯನ್ನು ಪರಿಗಣಿಸಿ, ನಿಯಮಾನುಸಾರ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳುವ ಅರ್ಹ ಉಪನ್ಯಾಸಕರಿಗೆ ಆಯಾ ಶೈಕ್ಷಣಿಕ ಸಾಲಿನ ಬೋಧನ ಕಾರ್ಯಭಾರದನ್ವಯ ವೇತನವನ್ನು ನಿಗದಿಪಡಿಸುತ್ತದೆ. |

ಸಂಖ್ಯೆ: ಇಡಿ 274 ಯುಎನ್ಇ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು